ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1077(1077)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಕಾರ್ಮಿಕ ಸಚಿವರು

ವಿಷಯ : ಮೈಸೂರಿನ ರೀಡ್ ಅಂಡ್ ಟೇಲರ್ ಕಾರ್ಖಾನೆಯಲ್ಲಿ ನೌಕರರ ವಜಾ ಬಗ್ಗೆ

(ಅ) ಮೈಸೂರಿನ ರೀಡ್ ಅಂಡ್ ಟೇಲರ್ ಕಾರ್ಖಾನೆಯಿಂದ ಎಷ್ಟು ನೌಕರರನ್ನು ಕೆಲಸದಿಂದ ತೆಗೆದುಹಾಕಲಾಗಿದೆ ; ಇವರ ಪುನರ್ ನೇಮಕಕ್ಕಾಗಿ ಸತ್ಯಾಗ್ರಹ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; ಈ ನೌಕರರಿಗೆ ಪರ್ಯಾಯ ವ್ಯವಸ್ಥೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಹಿಮ್ಮಾವು ಏಷಿಯನ್ ಪೇಂಟ್ಸ್ ಕಾರ್ಖಾನೆಗಾಗಿ ಭೂಮಿಯನ್ನು ನೀಡಿರುವ ರೈತರ ಮಕ್ಕಳಿಗೆ ಉದ್ಯೋಗ ನೀಡಲು ಕ್ರಮ ಜರುಗಿಸಲಾಗಿದೆಯೇ; ಭೂಮಿಯನ್ನು ಬಿಟ್ಟುಕೊಟ್ಟ ಎಷ್ಟು ಜನ ರೈತಾಪಿ ಜನರು ಈ ಬಗ್ಗೆ ಅರ್ಜಿ ಸಲ್ಲಿಸಿದ್ದಾರೆ; ಇದುವರೆಗೆ ಎಷ್ಟು ಜನ ರೈತಾಪಿ ಮಕ್ಕಳಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ; ಭೂಮಿಯನ್ನು ಕಳೆದುಕೊಂಡಿರುವ ಎಲ್ಲಾ ಕುಟುಂಬಗಳಿಗೂ ಉದ್ಯೋಗಾವಕಾಶ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?